"ವಿಧವಾ ವೇತನ ಪಡೆಯುತ್ತಿರುವ ಫಲಾನುಭವಿಗಳು"

4110(4550); ಡಾ॥ ರಫೀಕ್ ಅಹ್ಮದ್ ಎಸ್ (ತುಮಕೂರು ನಗರ)

ಅ) ತುಮಕೂರು ನಗರ ವಿಧಾನ ಸಭಾ ಕ್ಷೇತ್ರದಲ್ಲಿ ವಿಧವಾ ವೇತನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) 2014 ರ ಏಪ್ರಿಲ್‌ವರೆಗೆ ವಿಧವಾ ವೇತನ ಪಡೆಯುತ್ತಿರುವ ಫಲಾನುಭವಿಗಳಿಗೆ ಪಾವತಿ ಮಾಡಿರುವ ಮೊತ್ತ ಎಷ್ಟು?

ಶ್ರೀ ವಿ. ಶ್ರೀನಿವಾಸ್ ಪ್ರಸಾದ್ (ಕಂದಾಯ ಸಚಿವರು)

ಅ) ತುಮಕೂರು ನಗರ ವಿಧಾನ ಸಭಾ ಕ್ಷೇತ್ರದಲ್ಲಿ ವಿಧವಾ ವೇತನ ಯೋಜನೆಯಡಿ ಮಾಸಿಕ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ವಿವರ ಕೆಳಕಂಡಂತಿದೆ.

ಒಟ್ಟು ಫಲಾನುಭವಿಗಳ ಸಂಖ್ಯೆ	ಬ್ಯಾಂಕ್ ಮೂಲಕ ಪಿಂಚಣಿ ಪಾವತಿಯಾಗುತ್ತಿರುವ ಫಲಾನುಭವಿಗಳ ಸಂಖ್ಯೆ	ಇ ಎಂ ಓ ಮೂಲಕ ಪಿಂಚಣಿ ಪಾವತಿಯಾಗುತ್ತಿರುವ ಫಲಾನುಭವಿಗಳ ಸಂಖ್ಯೆ
3817	572	3245

ಆ) 2014–15 ನೇ ಸಾಲಿನಲ್ಲಿ 2014 ರ ಏಪ್ರಿಲ್ ಮಾಹೆಯ ಅಂತ್ಯಕ್ಕೆ ತುಮಕೂರು ವಿಧಾನ ಸಭಾ ಕ್ಷೇತ್ರದಲ್ಲಿ ವಿಧವಾ ವೇತನ ಯೋಜನೆಯಡಿ ಪ್ರತೀ ಫಲಾನುಭವಿಗೆ ಮಾಸಿಕ ₹ 500 ಗಳಂತೆ 3817 ಫಲಾನುಭವಿಗಳಿಗೆ ಒಟ್ಟು 19,08,500 ರೂಗಳ ಮೊತ್ತವನ್ನು ಮಾಸಿಕ ಪಿಂಚಣಿ ಪಾವತಿಸಲು ವೆಚ್ಚ ಮಾಡಲಾಗಿದೆ.